CW-09
PW-06

**1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಯಚೂರು.**

ಎಸ್.ಸಿ. ಸಂಖ್ಯೆ: 127/2021

ದಿ. 28-02-2026

(ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು )

ಚಾಸಾ-09
ಫ್ರಾಸಾ-06

| | |
|---|---|
| ಸಾಕ್ಷಿದಾರರ ಹೆಸರು | ಮಲ್ಲಿಕಾರ್ಜುನ |
| ತಂದೆಯ ಹೆಸರು | ಕರಿಯಪ್ಪ |
| ವಯಸ್ಸು | 40 ವರ್ಷ |
| ಉದ್ಯೋಗ | ಒಕ್ಕಲುತನ |
| ವಾಸಸ್ಥಳ | ಮಾಚನೂರು |

**ಮುಖ್ಯ ವಿಚಾರಣೆಃ ಸಾರ್ವಜನಿಕ ಅಭಿಯೋಜಕರಿಂದಃ-**

1. ನನಗೆ ಚಾಸಾ-1, 4 ರಿಂದ 7 ಹಾಗೂ 10 ಗೊತ್ತು.

2. ಈಗ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿತರು ನನಗೆ ಗೊತ್ತು.

3. ಈ ಪ್ರಕರಣದಲ್ಲಿ ನನಗೇನು ಮಾಹಿತಿ ಇರುವುದಿಲ್ಲ.

4. ಯಾವ ಕಾಲಕ್ಕೂ ಯಾವುದೇ ರೀತಿಯಲ್ಲಿ ಪೊಲೀಸರು ನನ್ನನ್ನು ವಿಚಾರಣೆ ಮಾಡಿರುವುದಿಲ್ಲ ಮತ್ತು ನನ್ನಿಂದ ಯಾವುದೇ ಹೇಳಿಕೆಯನ್ನು ದಾಖಲಿಸಿಕೊಂಡಿರುವುದಿಲ್ಲ.

CW-09
PW-06

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ವಿಶೇಷ ಅಭಿಯೋಜಕರು ಕೋರಿದ್ದಾರೆ. ಅದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ವಿಶೇಷ ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ.)**

**ಪಾಟೀ ಸವಾಲುಃ ಸಾರ್ವಜನಿಕ ಅಭಿಯೋಜಕರಿಂದ**

5. ಈಗ ನನಗೆ ಓದಿ ಹೇಳಿದ ನಿಪಿ-3 ರಂತೆ "ನಮ್ಮ ಗ್ರಾಮದಲ್ಲಿ ನಾಯ ಜನಾಂಗದವರಾದ ಈರಣ್ಣ ತಂದೆ ತಿಮ್ಮಪ್ಪ ಬರಿಗಾಲವರು ಮತ್ತು ದೊಡ್ಡ

-------------------------------------------------------------------------------

-------------------------------------------------------------------------------

-------------------------------------------------------------------------------

-------------------------------------------------------------------------------

ಎಳೆದಾಡಿ ಅವಮಾನ ಮಾಡಿ ಇನ್ನೊಂದು ಸಲ ನಮ್ಮ ತಂಟೆಗೆ ಬಂದರೆ ನಿಮ್ಮನ್ನು ಮುಗಿಸಿ ಬಿಡುತ್ತೇವೆಂದು ಜೀವ ಬೆದರಿಕೆಯ ಹಾಕಿರುತ್ತಾರೆ" ಎಂದು ದಿಃ 12-06-2020 ರಂದು ನಾನು ಪೊಲೀಸರ ಮುಂದೆ ಹೇಳಿಕೆಯನ್ನು ನೀಡಿರುತ್ತೇನೆ ಎಂಬುದು ಸರಿಯಲ್ಲ.

6. ಈಗ ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದು ಸೂಚಿಸುವುದು ಸರಿಯಲ್ಲ.

CW-09
PW-06

**<u>ಪಾಟೀ ಸವಾಲಃ ಶ್ರೀ ಎಸ್.ಕೆ.ಆರ್. ವಕೀಲರಿಂದ ಆರೋಪಿತರ ಪರವಾಗಿಃ</u>**

ಏನೂ ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ.

(ಜಿ.ಡಿ.ಮಹಾವರ್ಕರ್)
1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ರಾಯಚೂರು.